# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :** 1006

**ಸದಸ್ಯರ ಹೆಸರು** : ಶ್ರೀ ಬಿ.ಎಂ ಫಾರೂಖ್ (ವಿಧಾನಸಭೆಯಿಂದ ಚುನಾಯಿತರಾದವರು)

**ಉತ್ತರಿಸುವ ದಿನಾಂಕ** : 23.02.2024

**ಉತ್ತರಿಸುವ ಸಚಿವರು** : ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಸುಮಾರು 2400 ವರ್ಷಗಳ ಹಿಂದಿನ ರಾಜ್ಯ ಮತ್ತು ದೇಶಾದ್ಯಂತ ಸುಮಾರು 70 ಲಕ್ಷಕ್ಕು ಹೆಚ್ಚು ಜನ ಮಾತನಾಡುವ ತುಳು ಭಾಷೆಯನ್ನು ರಾಜ್ಯದ ಎರಡನೇ ಅಧಿಕೃತ ಭಾಷೆಯನ್ನಾಗಿ ಘೋಷಣೆ ಮಾಡುವ ಬಗ್ಗೆ ಕರಾವಳಿ ಕರ್ನಾಟಕ ಜನರ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| (ಆ) | ತುಳು ಭಾಷೆಯನ್ನು ರಾಜ್ಯದ ಎರಡನೇ ಭಾಷೆಯನ್ನಾಗಿ ಯಾವ ಕಾಲಮಿತಿಯಲ್ಲಿ ಘೋಷಿಸಲಾಗುವುದು; | ಸರ್ಕಾರದ ಆದೇಶ ಸಂಖ್ಯೆ:ಕಸಂವಾ 36 ಕೆಓಎಲ್ ಆಕ 2021 ದಿನಾಂಕ:12.01.2023ರ ಆದೇಶದಲ್ಲಿ, ತುಳು ಭಾಷೆಯನ್ನು ಕರ್ನಾಟಕ ರಾಜ್ಯದಲ್ಲಿ ಎರಡನೇ ಅಧಿಕೃತ ಭಾಷೆಯಾಗಿ ಘೋಷಣೆ ಮಾಡುವ ಕುರಿತು ಅಧ್ಯಯನ ನಡೆಸಿ ವರದಿ ನೀಡಲು ಡಾ. ಮೋಹನ ಆಳ್ವ ಇವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಆದೇಶಿಸಲಾಗಿರುತ್ತದೆ.<br><br>ಸದರಿ ಸಮಿತಿಯು ತುಳು ಭಾಷೆಯ ಸ್ವರೂಪ ಮತ್ತು ಇತಿಹಾಸ, ತುಳು ಸಾಹಿತ್ಯ ಪರಂಪರೆ, ತುಳು ಲಿಪಿ, ಪ್ರಾಚೀನ ತುಳು ಸಾಹಿತ್ಯ, ಆಧುನಿಕ ತುಳು ಸಾಹಿತ್ಯ, ಸಂಸ್ಕೃತಿ, ತುಳು ಶಾಸನಗಳ ಕುರಿತು ಅಧ್ಯಯನ ನಡೆಸಿ ವರದಿಯನ್ನು ಸಲ್ಲಿಸಿರುತ್ತದೆ.<br><br>ಸಮಿತಿಯು ಸಲ್ಲಿಸಿರುವ ವರದಿಯ ಮೇಲೆ ಕಾನೂನು ಇಲಾಖೆಯ ಅಭಿಪ್ರಾಯವನ್ನು ಕೋರಲಾಗಿ, ಕಾನೂನು ಇಲಾಖೆಯ ಈ ಕೆಳಕಂಡಂತೆ ಅಭಿಪ್ರಾಯವನ್ನು ನೀಡಿರುತ್ತದೆ.<br><br>ಯಾವುದೇ ರಾಜ್ಯ ಸರ್ಕಾರದ ಒಂದು ಭಾಷೆಯನ್ನು ಆ ರಾಜ್ಯದ ಅಧಿಕೃತ ಭಾಷೆಯೆಂದು ಘೋಷಿಸುವ ಪೂರ್ವದಲ್ಲಿ ಸದರಿ ರಾಜ್ಯಗಳು ಕಾನೂನಾತ್ಮಕವಾಗಿ ಸಮಿತಿಗಳನ್ನು ರಚನೆ ಮಾಡಿ ಮತ್ತು ವರದಿಯನ್ನು ಪಡೆದುಕೊಂಡು ಆನಂತರ ಮುಂದುವರೆಯ - ಬಹುದಾಗಿರುತ್ತದೆ ಮತ್ತು ವಿವಧ ರಾಜ್ಯಗಳಲ್ಲಿ ಎರಡನೇ |

| | | |
|---|---|---|
| | | ಅಧಿಕೃತ ಭಾಷೆಯನ್ನು ಅಧಿಕೃತ ಭಾಷೆಯೆಂದು ಘೋಷಿಸಿರುವ ಬಗ್ಗೆ ಅಧ್ಯಯನ ನಡೆಸಿ, ಅನಂತರ ಮುಂದುವರೆಯಬಹುದಾಗಿದೆ ಎಂದು ತಿಳಿಸಿರುತ್ತದೆ.<br><br>ಕಾನೂನು ಇಲಾಖೆಯ ಅಭಿಪ್ರಾಯದನ್ವಯ ಸಮಿತಿ ರಚನೆ ಮಾಡಲಾಗಿರುತ್ತದೆ. ಸದರಿ ಸಮಿತಿಯು ನೀಡಿರುವ ವರದಿಯನ್ನು ಕಾನೂನು ಇಲಾಖೆಯ ಅಭಿಪ್ರಾಯಕ್ಕಾಗಿ ಸಲ್ಲಿಸಲಾಗಿರುತ್ತದೆ. ಕಾನೂನು ಇಲಾಖೆಯು ಇತರೆ ರಾಜ್ಯಗಳು ಎರಡನೇ ಅಧಿಕೃತ ಭಾಷೆಯನ್ನಾಗಿ ಅಳವಡಿಸಿಕೊಳ್ಳಲು ತೆಗೆದುಕೊಂಡ ಕ್ರಮಗಳನ್ನು ಪರಿಶೀಲಿಸುವಂತೆ ತಿಳಿಸಿರುತ್ತದೆ. ಈ ಬಗ್ಗೆ ಮಾಹಿತಿಯನ್ನು ಒದಗಿಸುವಂತೆ ಬಿಹಾರ, ಆಂಧ್ರಪ್ರದೇಶ ಮತ್ತು ಪಶ್ಚಿಮ ಬಂಗಾಳ ರಾಜ್ಯಗಳನ್ನು ಕೋರಲಾಗಿರುತ್ತದೆ. |
| ಇ) | ಸಂವಿಧಾನದ 8ನೇ ಅನುಚ್ಛೇದದಲ್ಲಿ ತುಳು ಭಾಷೆ ಸೇರಿಸಲು ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಯಾವಾಗ ಸಲ್ಲಿಸಲಾಗುವುದು ಹಾಗೂ ಪ್ರಸ್ತಾವನೆ ಸಲ್ಲಿಸಲು ತೆಗೆದುಕೊಳ್ಳುವ ಕ್ರಮಗಳೇನು? | ತುಳು ಭಾಷೆಯನ್ನು ಸಂವಿಧಾನದ 8ನೇ ಅನುಚ್ಛೇದದಲ್ಲಿ ಸೇರಿಸುವ ಸಂಬಂಧ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸಲಾಗಿರುತ್ತದೆ. |

**ಸಂಖ್ಯೆ.ಕಸಂವಾ 23 ಕೆಓಎಲ್ ಆಕ 2024**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು